# <u>ಕರ್ನಾಟಕ ವಿಧಾನ ಪರಿಷತ್ತು</u>

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 64 (80) |
| ವಿಧಾನ ಪರಿಷತ್ತಿನ ಸದಸ್ಯರ ಹೆಸರು | : | ಶ್ರೀ ಡಿ.ಎಸ್. ಅರುಣ್<br>(ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) |
| ಉತ್ತರಿಸುವವರು | : | ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು |
| ಉತ್ತರಿಸುವ ದಿನಾಂಕ | : | 27.01.2026 |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ | ಪ್ರಸ್ತುತ ಸರ್ಕಾರವು ಅಸ್ತಿತ್ವಕ್ಕೆ ಬಂದ ನಂತರ ರಾಜ್ಯಕ್ಕೆ ಹರಿದುಬಂದ ಬಂಡವಾಳ ಹೂಡಿಕೆ ಪ್ರಮಾಣವೆಷ್ಟು; | ಪ್ರಸ್ತುತ ಸರ್ಕಾರವು ಅಸ್ತಿತ್ವಕ್ಕೆ ಬಂದ ನಂತರ (2023-24 ರಿಂದ ಪ್ರಸ್ತುತದವರೆಗೆ) ರಾಜ್ಯ ಉನ್ನತ ಮಟ್ಟದ ಒಪ್ಪಿಗೆ ನೀಡಿಕೆ ಸಮಿತಿ ಹಾಗೂ ರಾಜ್ಯ ಮಟ್ಟದ ಏಕಗವಾಕ್ಷಿ ಅನುಮೋದನಾ ಸಮಿತಿ ಸಭೆಗಳಲ್ಲಿ ಒಟ್ಟು 1283 ಯೋಜನೆಗಳಿಗೆ ಅನುಮೋದನೆ ನೀಡಲಾಗಿದ್ದು, ಇವುಗಳಿಂದ ರೂ. 178823.32 ಕೋಟಿ ಮೊತ್ತದ ಬಂಡವಾಳ ಹೂಡಿಕೆ ಮತ್ತು 348208 ಉದ್ಯೋಗಾವಕಾಶಗಳನ್ನು ನಿರೀಕ್ಷಿಸಲಾಗಿದೆ.<br><br>ಇವುಗಳ ಪೈಕಿ 26 ಯೋಜನೆಗಳು ಅನುಷ್ಠಾನಗೊಂಡಿದ್ದು, ಇವುಗಳಿಂದ ರೂ. 20893.50 ಕೋಟಿ ಮೊತ್ತದ ಬಂಡವಾಳ ಹೂಡಿಕೆಯಾಗಿದೆ ಹಾಗೂ 13688 ಸಂಖ್ಯೆಯ ಉದ್ಯೋಗ ಸೃಜನೆಯಾಗಿದೆ. ಉಳಿದ ಯೋಜನೆಗಳು ವಿವಿಧ ಅನುಷ್ಠಾನದ ಹಂತಗಳಲ್ಲಿವೆ. |
| ಆ | ರಾಜ್ಯ ಸರ್ಕಾರದೊಂದಿಗೆ ಆಗಿರುವ ಒಪ್ಪದಗಳ ಸಂಖ್ಯೆ ಎಷ್ಟು; ಈ ಪೈಕಿ ಎಷ್ಟು ಒಪ್ಪಂದಗಳು ಚಾಲನೆಗೊಂಡಿವೆ; ಎಷ್ಟು ಒಪ್ಪಂದಗಳು ನೆನೆಗುದಿಗೆ ಬಿದ್ದಿವೆ; ಚಾಲನೆಗೊಳ್ಳದೆ ನೆನೆಗುದಿಗೆ ಬೀಳಲು ಕಾರಣಗಳೇನು; | ರಾಜ್ಯ ಸರ್ಕಾರವು 117 ಕಂಪನಿಗಳೊಂದಿಗೆ ಒಟ್ಟು ರೂ.6,70,560 ಕೋಟಿ ಬಂಡವಾಳ ಹೂಡಲು ಒಪ್ಪಂದಗಳಿಗೆ ಸಹಿ ಮಾಡಿರುತ್ತದೆ. ಇವುಗಳಿಂದ 2,47,571 ಜನರಿಗೆ ಉದ್ಯೋಗ ದೊರಕಲಿದೆ.<br><br>ಈ ಪೈಕಿ 13 ಯೋಜನೆಗಳಿಗೆ ರಾಜ್ಯ ಉನ್ನತ ಮಟ್ಟದ ಒಪ್ಪಿಗೆ ಸಮಿತಿ/ರಾಜ್ಯ ಮಟ್ಟದ ಏಕ ಗವಾಕ್ಷಿ ಅನುಮೋದನಾ ಸಮಿತಿ ಸಭೆಗಳಲ್ಲಿ ಅನುಮೋದನೆ ನೀಡಲಾಗಿದೆ. 32 ಯೋಜನೆಗಳ ಪ್ರಸ್ತಾವನೆಗಳನ್ನು ಸ್ವೀಕರಿಸಲಾಗಿರುತ್ತದೆ. ಸದ್ಯದಲ್ಲೇ ಅನುಮೋದನೆ ನೀಡಲಾಗುತ್ತದೆ.<br><br>ಒಟ್ಟಾರೆ 45 ಯೋಜನೆಗಳಿಂದ 1,19,047 ಜನರಿಗೆ ಉದ್ಯೋಗ ದೊರೆಯಲಿದೆ.<br><br>ಈ ಯೋಜನೆಗಳು ಬೃಹತ್ ಕೈಗಾರಿಕೆಗಳಾಗಿರುವುದರಿಂದ, ಅನುಷ್ಠಾನಕ್ಕೆ ಕನಿಷ್ಠ 3 ರಿಂದ 5 ವರ್ಷಗಳು ಬೇಕಾಗುತ್ತದೆ. |
| ಇ | ಈ ಒಪ್ಪದಂದಗಳ ಮೂಲಕ ನಿರೀಕ್ಷಿಸಲಾದ ಉದ್ಯೋಗ ಸೃಷ್ಟಿ ಪ್ರಮಾಣವೆಷ್ಟು; ನಿರೀಕ್ಷೆಯಂತೆ ಉದ್ಯೋಗ ಸೃಷ್ಟಿ ಆಗಿಯೇ; ಆಗದಿದ್ದಲ್ಲಿ ಕಾರಣಗಳೇನು? | |

**ಕಡತ ಸಂಖ್ಯೆ ಸಿಐ 22 ಎಸ್‌ಪಿಐ 2026**

**(ಎಂ.ಬಿ. ಪಾಟೀಲ)**
ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ
ಮೂಲಸೌಲಭ್ಯ ಅಭಿವೃದ್ಧಿ ಸಚಿವರು